# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 316 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಎನ್.ಎಸ್. ಬೋಸ್‌ರಾಜು |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 12-07-2018 |
| ಪ್ರಶ್ನೆ | | ಉತ್ತರ |
| (ಅ) | ರಾಯಚೂರಿನಲ್ಲಿ ನೂತನ ವಿಶ್ವವಿದ್ಯಾಲಯ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು; | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮಸೂದೆ 2017ರಲ್ಲಿ ರಾಯಚೂರು ವಿಶ್ವವಿದ್ಯಾಲಯದ ಸ್ಥಾಪನೆಯ ಅಂಶವನ್ನು ಸೇರ್ಪಡೆಗೊಳಿಸಲಾಗಿರುತ್ತದೆ. ಪ್ರಸ್ತುತ, ಸದರಿ ಮಸೂದೆಯು ಕರ್ನಾಟಕ ವಿಧಾನ ಮಂಡಲದ ಉಭಯ ಸದನಗಳಲ್ಲಿ ಅಂಗೀಕಾರಗೊಂಡು ಘನತೆವೆತ್ತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲಾಗಿದೆ. |
| (ಆ) | 2018-19ನೇ ಸಾಲಿನಲ್ಲಿ ರಾಯಚೂರು ವಿಶ್ವವಿದ್ಯಾಲಯ ಪ್ರಾರಂಭಿಸಲು ಮಾಡಲಾಗಿರುವ ಸಿದ್ಧತೆಗಳೇನು; | ಪ್ರಸ್ತುತ, ರಾಯಚೂರು ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ವಿಶೇಷಾಧಿಕಾರಿಯನ್ನು ನೇಮಿಸಲಾಗಿದೆ. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮಸೂದೆ 2017 ಘನತೆವೆತ್ತ ರಾಜ್ಯಪಾಲರಿಂದ ಅಂಗೀಕಾರಗೊಂಡ ನಂತರ ಶೈಕ್ಷಣಿಕ ಚಟುವಟಿಕೆಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು. |
| ಇ) | ಮಾನ್ವಿ ತಾಲ್ಲೂಕಿನ ಕವಿತಾಳದಲ್ಲಿ ವಸತಿಯುಕ್ತ ಪದವಿ ಕಾಲೇಜ್ ಪ್ರಾಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; | ಮಾನ್ವಿ ತಾಲ್ಲೂಕಿನ ಕವಿತಾಳದಲ್ಲಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಸಂ. ಇಡಿ 56 ಹೆಚ್‌ಪಿಸಿ 2017, ದಿನಾಂಕ: 19-07-2017ರಲ್ಲಿ ಆದೇಶಿಸಿ ಅನುಮತಿ ನೀಡಲಾಗಿದ್ದು, ಕಾಲೇಜು ಕಟ್ಟಡ ನಿರ್ಮಾಣಕ್ಕೆ ರಾಯಚೂರು ಜಿಲ್ಲಾಧಿಕಾರಿಗಳು ಮಾನ್ವಿ ತಾಲ್ಲೂಕಿನ ಕವಿತಾಳ ಗ್ರಾಮದಲ್ಲಿ ಸರ್ವೆ ಸಂ. 7/1ರಲ್ಲಿ ಒಂಭತ್ತು ಎಕರೆ ಜಮೀನನ್ನು ಕಾಯ್ದಿರಿಸಿ ಆದೇಶ ಸಂ. LND-11/263/2017-RAL-LND-Raichur Dist ರಲ್ಲಿ ಆದೇಶಿಸಿರುತ್ತಾರೆ. ರೂ. 23.50 ಕೋಟಿಗಳ ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗೆ (KREIS) ವಹಿಸಲಾಗಿರುತ್ತದೆ. ನಿರ್ಮಾಣ ಸಂಸ್ಥೆ ಸಲ್ಲಿಸಿದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ರೂ. 828.60ಲಕ್ಷಗಳನ್ನು ಪಾವತಿಸಲಾಗಿರುತ್ತದೆ. |

| | | |
|---|---|---|
| ಈ) | ರಾಯಚೂರು ನಗರದ ಸರ್ಕಾರಿ ಪಾಟಲೆಕ್ನಿಕ್ ಕಾಲೇಜಿನಲ್ಲಿ ಬೋಧಕರ ಕೊರತೆ ಮತ್ತು ಮೂಲಭೂತ ಸೌಲಭ್ಯದ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ರಾಯಚೂರು ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಒಟ್ಟಾರೆ ಬೋಧಕ ವೃಂದಕ್ಕೆ 46 ಹುದ್ದೆಗಳು ಮಂಜೂರಾಗಿದ್ದು, 25 ಹುದ್ದೆಗಳು ಭರ್ತಿಯಾಗಿದ್ದು, 21 ಹುದ್ದೆಗಳು ಖಾಲಿಯಿರುತ್ತವೆ.<br>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br>ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಆರ್ಥಿಕ ಮಿತವ್ಯಯ ಸಡಿಲಿಕೆಯಾಗಿದ್ದು, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಖಾಲಿ ಹುದ್ದೆಗಳು ಮತ್ತು ರಾಜ್ಯ ಮಟ್ಟಕ್ಕೆ ಮೀಸಲಿಟ್ಟಿರುವ ಹುದ್ದೆಗಳನ್ನು ಒಳಗೊಂಡಂತೆ ಒಟ್ಟಾರೆ 501 ಗ್ರೂಪ್-ಬಿ ಹುದ್ದೆಗಳನ್ನು ತುಂಬಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 01 ಆರ್‌ಟಿಬಿ-2/2016, ದಿ: 17-12-2016 ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಆದರೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ಎಐಸಿಟಿಇ ನಿಯಮಾವಳಿಗಳನ್ವಯ ವಿದ್ಯಾರ್ಹತೆಯನ್ನು ತಿದ್ದುಪಡಿ ತರಬೇಕಾದ ಹಿನ್ನಲೆಯಲ್ಲಿ, ಸರ್ಕಾರದ ಪತ್ರ ಸಂಖ್ಯೆ: ಇಡಿ 196 ಡಿಟಿಇ 2016 ದಿ: 08-05-2017ರ ಪತ್ರದಲ್ಲಿ ನೇರ ನೇಮಕಾತಿ ಪ್ರಕ್ರಿಯೆಯನ್ನು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತಂದನಂತರ ಮುಂದುವರಿಸಲು ಸೂಚಿಸಲಾಗಿರುತ್ತದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ತಿದ್ದುಪಡಿಯಾದ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು.<br>ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ಒಂದು ಹುದ್ದೆಗೆ ಎರಡು ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಗೆ ತೊಂದರೆಯಾಗದಂತೆ ಪಾಠ ಪ್ರವಚನಗಳನ್ನು ನಡೆಸಲಾಗುತ್ತಿದೆ.<br>ಮೂಲಭೂತ ಸೌಲಭ್ಯಗಳ ವಿವರ:<br>ರಾಯಚೂರು ನಗರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.<br><br>2008-09ನೇ ಸಾಲಿಗೆ ಕೇಂದ್ರ ಸರ್ಕಾರದ ಧನ ಸಹಾಯ ಯೋಜನೆಯಡಿ ರೂ.1.00 ಕೋಟಿಗಳ ಅಂದಾಜು ವೆಚ್ಚದಲ್ಲಿ ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯ ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ. ಕಾಮಗಾರಿ ಪೂರ್ಣಗೊಂಡಿದೆ.<br>2013-14ನೇ ಸಾಲಿಗೆ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ರೂ.99.60 ಲಕ್ಷಗಳ ಅಂದಾಜು ವೆಚ್ಚದಲ್ಲಿ ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯ ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ. ಪ್ರಸ್ತುತ ಗಿಲಾವು ಕೆಲಸ ಮುಗಿದಿದ್ದು, ಬಣ್ಣದ ಕೆಲಸ ಪ್ರಗತಿಯಲ್ಲಿದೆ. ಸೆಪ್ಟೆಂಬರ್-2018ರೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ.<br>2016-17ನೇ ಸಾಲಿಗೆ ಅಂದಾಜು ಮೊತ್ತ ರೂ.10.00 ಲಕ್ಷ ಮತ್ತು 2017-18ನೇ ಸಾಲಿಗೆ ರೂ.77.40 ಲಕ್ಷಗಳ ಅಂದಾಜು ವೆಚ್ಚದಲ್ಲಿ ದುರಸ್ತಿ ಕಾಮಗಾರಿಗೆ ಅನುಮೋದನೆ ನೀಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. |

....3

<table>
<tr>
<td>ಉ)</td>
<td>ರಾಯಚೂರು ಸರ್ಕಾರಿ ಇಂಜಿನೀಯರಿಂಗ್ ಕಟ್ಟಡ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?</td>
<td>ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಡಿಟಿಇ 2011 ದಿನಾಂಕ:03-11-2011ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಾರವಾರ, ರಾಯಚೂರು, ಹೂವಿನಹಡಗಲಿ ಮತ್ತು ಗಂಗಾವತಿ ಕಾಲೇಜುಗಳಿಗೆ ಕಟ್ಟಡ ನಿರ್ಮಾಣ ಮತ್ತು ಇತರೇ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ದೃಷ್ಟಿಯಿಂದ ಈ ನಾಲ್ಕು ಇಂಜಿನಿಯರಿಂಗ್ ಕಾಲೇಜುಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ (ವಿ.ಟಿ.ಯು) ಹಸ್ತಾಂತರಿಸಲಾಗಿತ್ತು.<br><br>ಆದಾಯ ತೆರಿಗೆ ಇಲಾಖೆಯು ವಿ.ಟಿ.ಯುನ ಬ್ಯಾಂಕ್‌ನ ಖಾತೆಯನ್ನು ಮುಟ್ಟುಗೋಲು ಹಾಕಿಕೊಂಡಿದ್ದ ಪ್ರಯುಕ್ತ ವಿ.ಟಿ.ಯುನಲ್ಲಿ ಯಾವುದೇ ಅನುದಾನವು ಲಭ್ಯವಿಲ್ಲದ ಪ್ರಯುಕ್ತ ಸರ್ಕಾರವು ಆದೇಶ ಸಂಖ್ಯೆ:ಇಡಿ 45 ಹೆಚ್‌ಪಿಟಿ 2015 ದಿ:27-07-2015ರಲ್ಲಿ ಮೇಲೆ ತಿಳಿಸಿರುವ ನಾಲ್ಕು ಇಂಜಿನಿಯರಿಂಗ್ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಆದೇಶದ ದಿನದಿಂದ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ವರ್ಗಾಯಿಸಿ ಅನುಮತಿಯನ್ನು ನೀಡಿ, ಕಟ್ಟಡ ನಿರ್ಮಾಣ ಏಜೆನ್ಸಿಯಾದ ಮೆ.ರೈಟ್ಸ್ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡಲು ಅನುಮತಿಯನ್ನು ನೀಡಿ ಆದೇಶಿಸಿದೆ. ಅದರಂತೆ ತಾಂತ್ರಿಕ ಶಿಕ್ಷಣ ಇಲಾಖೆಯಿಂದ 2015-16ನೇ ಸಾಲಿನಿಂದ ಇಲ್ಲಿಯವರೆಗೆ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.
<table>
<tr><th>ಅಂದಾಜು ಮೊತ್ತ</th><th>ಟೆಂಡರ್ ಮೊತ್ತ</th><th>ವಿ.ಟಿ.ಯು ಯಿಂದ ಬಿಡುಗಡೆ</th><th>ಇಲಾಖೆಯಿಂದ ಬಿಡುಗಡೆ</th><th>ಒಟ್ಟು ಬಿಡುಗಡೆ</th><th>ಬಾಕಿ ಬಿಡುಗಡೆ</th></tr>
<tr><td>2229.00</td><td>2531.03</td><td>1000.00</td><td>1531.00</td><td>2531.00</td><td>0.00</td></tr>
</table>
ಪ್ರಸ್ತುತ ಕಾಮಗಾರಿಯು ಮುಕ್ತಾಯದ ಹಂತದಲ್ಲಿದ್ದು, ಆಗಸ್ಟ್-2018ರ ಅಂತ್ಯಕ್ಕೆ ಕಟ್ಟಡವನ್ನು ಹಸ್ತಾಂತರಿಸಿಕೊಳ್ಳಲಾಗುವುದು.</td>
</tr>
</table>

ಸಂಖ್ಯೆ: ಇಡಿ 239 ಯುಎನ್‌ಇ 2018

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು.